**ಶ್ರೀ ಸಿ.ಎಂ. ಉದಾಸಿ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು):**

ಅ, ಆ) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ವಿಭಾಗಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸಾಮಾನ್ಯ ಸೇವಾ (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಸರ್ಕಾರಿ ಶಾಖೆ (ನೇಮಕಾತಿ) ನಿಯಮಗಳು 1962 ಈಗಾಗಲೇ ಚಾಲ್ತಿಯಲ್ಲಿದೆ. ಆದರೆ 1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದಡಿಯಲ್ಲಿ ಜಿಲ್ಲಾ ಪಂಚಾಯತ್‌ಗಳಲ್ಲಿ ವಿಲೀನಗೊಂಡ ನೌಕರರ ಸೇವಾ ನಿರ್ವಹಣೆಗೆ ಸಂಬಂಧಿಸಿದಂತೆ ನಿಯಮಗಳ ರಚನೆ ಕುರಿತಾದ ವಿಷಯ ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ.

ಇ) 1983ರ ಪಂಚಾಯತ್ ರಾಜ್ ಕಾಯ್ದೆಯು ನಿರಸನಗೊಂಡಿದ್ದು, 1993ರ ಕಾಯ್ದೆಯನ್ನು ಜಾರಿಗೊಳಿಸಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್ ನೌಕರರಿಗೆ ಸೇವಾ ನಿಯಮವನ್ನು ರಚಿಸುವ ಪ್ರಸಂಗವಿರುವುದರಿಂದ, ಇದನ್ನು ಸಮಗ್ರವಾಗಿ ಪರಿಶೀಲಿಸಿ ಸರ್ಕಾರದ ಅತ್ಯುನ್ನತ ಹಂತದಲ್ಲಿ ನಿರ್ಣಯ ಕೈಗೊಂಡು ಜಾರಿಗೊಳಿಸಬೇಕಾಗಿರುವುದರಿಂದ, ಈ ಪ್ರಕ್ರಿಯೆಗೆ ಹೆಚ್ಚು ಸಮಯ ತೆಗೆದುಕೊಂಡಿದೆಯೇ ಹೊರತು ವಿಳಂಬ ನೀತಿ ಇರುವುದಿಲ್ಲ.

ಈ) ಜಿಲ್ಲಾ ಪಂಚಾಯಿತಿ ಇತ್ಯಾದಿಗಳನ್ನು ಸೃಜಿಸಿದ ನಂತರ ಸದರಿ ಕಛೇರಿಗಳ ಕೆಲಸಗಳನ್ನು ಸುಸೂತ್ರವಾಗಿ ನಿರ್ವಹಿಸಲು ಅನುವಾಗುವಂತೆ ಸರ್ಕಾರದ ಬೇರೆ ಬೇರೆ ಇಲಾಖೆಗಳಿಂದ ನೌಕರರನ್ನು ನಿಯೋಜನೆ ಮೇರೆಗೆ ನೇಮಿಸಲಾಗಿದೆ.

ಸೂಕ್ತ ಸಮಯದಲ್ಲಿ, ಹಾಗೂ ಅವರ ಅಗತ್ಯತೆಯು ಇಲ್ಲವೆಂಬ ಪ್ರಸಂಗ ಒದಗಿ ಬಂದಾಗ ಅವರುಗಳನ್ನು ಮಾತೃ ಇಲಾಖೆಗೆ ಹಿಂದಿರುಗಿಸಲಾಗುವುದು.

ಉ) ಖಾಲಿ ಇರುವ ಪಂಚಾಯಿತಿ ವಿಸ್ತರಣಾಧಿಕಾರಿಗಳಿಗೆ ಬಡ್ತಿ ಮೂಲಕ ಭರ್ತಿ ಮಾಡಲು ಗ್ರೇಡ್–1 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ವೃಂದದ ಜೇಷ್ಠತಾ ಪಟ್ಟಿಯಲ್ಲಿನ ಅರ್ಹ ನೌಕರರ ಸೇವಾ ವಿವರಗಳನ್ನು ಪಡೆದು ಪರಿಶೀಲಿಸಲಾಗುತ್ತಿದೆ. ಮಿತವ್ಯಯ ಆದೇಶದಡಿ ಬಡ್ತಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದ ತಕ್ಷಣವೇ ಬಡ್ತಿ ನೀಡಲು ಕ್ರಮ ವಹಿಸಲಾಗುವುದು.

**586 (896) ಶ್ರೀ ಹೆಚ್.ಎಸ್.ಶಂಕರಲಿಂಗೇಗೌಡ (ಚಾಮರಾಜ) :–** ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

01) ಮೈಸೂರು ನಗರದ ಕುಂಬಾರಕೊಪ್ಪಲಿಗೆ ಸರ್ಕಾರಿ, ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡಬೇಕೆಂಬ ಬೇಡಿಕೆ ಬಗ್ಗೆ ಮೈಸೂರಿನ ಉಪ ನಿರ್ದೇಶಕರ ಕಛೇರಿ, ಕಳೆದ ಅನೇಕ ವರ್ಷಗಳಿಂದ ಸರ್ಕಾರಕ್ಕೆ ಪ್ರಸ್ತಾವನೆ ಕಳುಹಿಸಿರುವುದು ಗಮನದಲ್ಲಿದೆಯೇ;

02) ಇಲ್ಲಿಗೆ ಹಲವಾರು ವರ್ಷಗಳಿಂದ ಮನವಿ ಮಾಡಿದರೂ ಸಹ ಪ್ರೌಢಶಾಲೆ ಮಂಜೂರು ಮಾಡದಿರಲು ಕಾರಣಗಳೇನು ತಿಳಿಸುವುದು;

03) ಮುಂದೆಯಾದರೂ ಇಲ್ಲಿಗೆ ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡುವ ಬಗ್ಗೆ ಸರ್ಕಾರದ ನಿಲುವೇನು ತಿಳಿಸುವುದು?

**ಶ್ರೀ ಬಸವರಾಜ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):**

01) 2007–08ನೇ ಸಾಲಿನಲ್ಲಿ ಮೈಸೂರಿನ ಕುಂಬಾರಕೊಪ್ಪಲಿಗೆ ಸರ್ಕಾರಿ ಪ್ರೌಢಶಾಲೆಯನ್ನು ಮಂಜೂರು ಮಾಡಿದೆ.

02, 03) ಈಗಾಗಲೇ ಕುಂಬಾರಕೊಪ್ಪಲಿಗೆ ಸರ್ಕಾರಿ ಪ್ರೌಢಶಾಲೆ ಮಂಜೂರು ಮಾಡಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

**587 (897) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) :–** ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರ/ಜಿಲ್ಲೆಯಲ್ಲಿ ಇರುವ ಕಾನೂನು ಕಾಲೇಜುಗಳು ಎಷ್ಟು; (ವಿವರ ನೀಡುವುದು);

ಆ) ಮೈಸೂರು ನಗರಕ್ಕೆ ಸರ್ಕಾರಿ ಕಾನೂನು ಕಾಲೇಜು ಮಂಜೂರು ಮಾಡಬೇಕೆಂಬ ಬೇಡಿಕೆಯ ಬಗ್ಗೆ ಸರ್ಕಾರ ಯಾವ ಕ್ರಮವಹಿಸಿದೆ ತಿಳಿಸುವುದು;

ಇ) ಮೈಸೂರು ನಗರಕ್ಕೆ ಸರ್ಕಾರಿ ಕಾನೂನು ಕಾಲೇಜನ್ನು ಬರುವ ಶೈಕ್ಷಣಿಕ ವರ್ಷದಿಂದ ಆರಂಭಿಸುವ ಬಗ್ಗೆ ಸರ್ಕಾರದ ನಿಲುವೇನು ತಿಳಿಸುವುದು?

**ಶ್ರೀ ಡಿ.ಹೆಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು) :**

ಅ) ಅಂತಹ ನಾಲ್ಕು ಕಾಲೇಜುಗಳಿರುತ್ತವೆ.

* ಶಾರದಾವಿಲಾಸ ಕಾನೂನು ಕಾಲೇಜು, ಮೈಸೂರು,